## ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 54 (446+526) |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) ಹಾಗೂ ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 30.01.2026 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರಿನಲ್ಲಿರುವ ರಾಷ್ಟ್ರಕವಿ ಕುವೆಂಪು ಅವರ 'ಉದಯರವಿ' ನಿವಾಸವು 'ಶ್ರೀ ರಾಮಾಯಣ ದರ್ಶನಂ' ಕೃತಿಯ ಜನ್ಮಕ್ಕೆ ಮತ್ತು 'ವಿಶ್ವಮಾನವ' ಸಂದೇಶದ ಉಗಮಕ್ಕೆ ಸಾಕ್ಷಿಯಾದ ಸಂಕೇತವಾಗಿದ್ದು, ಇಂಥ ಪುಣ್ಯಸ್ಥಳವನ್ನು ವಸ್ತು ಸಂಗ್ರಹಾಲಯವನ್ನಾಗಿ ಮಾಡಬೇಕೆನ್ನುವುದು ಪ್ರತಿಯೊಬ್ಬ ಕನ್ನಡಿಗರ ಬಹುಕಾಲದ ಕನಸು ಮತ್ತು ಬೇಡಿಕೆಯಾಗಿದ್ದು, ಈ ಕುರಿತು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | 2018-19ನೇ ಸಾಲಿನ ಆಯವ್ಯಯದ ಕಂಡಿಕೆ-252 ರಲ್ಲಿ "ಮಹಾಕವಿ ಕುವೆಂಪುರವರ ಮೈಸೂರಿನ ನಿವಾಸ ಉದಯರವಿಯನ್ನು ರಾಷ್ಟ್ರಕವಿ ಸ್ಮಾರಕವಾಗಿ ಸಂರಕ್ಷಿಸಿ ಅಭಿವೃದ್ಧಿಪಡಿಸಲಾಗುವುದು. ಮಹಾಕವಿಯ ದರ್ಶನವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ಸ್ಮಾರಕದ ಉದ್ದೇಶವಾಗಿರುತ್ತದೆ" ಎಂದು ಘೋಷಣೆಯಾಗಿರುತ್ತದೆ. ಪ್ರತಿಯನ್ನು **ಅನುಬಂಧ**ದಲ್ಲಿರಿಸಿದೆ. |
| ಆ) | ಇದ್ದಲ್ಲಿ, ಇಂಥಾ ಪುಣ್ಯಸ್ಥಳವನ್ನು ವಿಶ್ವ ದರ್ಜೆಯ ಹಾಗೂ ಶ್ರೇಷ್ಠ ಮಾದರಿಯ ವಸ್ತು ಸಂಗ್ರಹಾಲಯವನ್ನಾಗಿ ಮಾಡಲು ಸರ್ಕಾರ ಇದುವರೆಗೆ ಯಾವುದೇ ಅಗತ್ಯ ಕ್ರಮವಹಿಸದೇ ಇರಲು ಕಾರಣಗಳೇನು; | ಶ್ರೀಮತಿ ತಾರಿಣಿ ಚಿದಾನಂದ (ರಾಷ್ಟ್ರಕವಿ ಕುವೆಂಪು ರವರ ಮಗಳು) ಇವರು ರಾಷ್ಟ್ರ ಕವಿ ಕುವೆಂಪು ಅವರ ಮೈಸೂರು ನಿವಾಸ ಉದಯರವಿಯನ್ನು ಸ್ಮಾರಕವನ್ನಾಗಿ ಸಂರಕ್ಷಿಸಿ ಸರ್ಕಾರಕ್ಕೆ ಹಸ್ತಾಂತರಿಸಲು ಕೆಲವು ಬೇಡಿಕೆಗಳನ್ನು ಸಲ್ಲಿಸಿರುತ್ತಾರೆ. |
| ಇ) | ನಾಡಿನ ಸಂಸ್ಕೃತಿಯನ್ನು ವ್ಯಾಖ್ಯಾನಿಸಿದ ಮಹನೀಯರ ಪರಂಪರೆಯನ್ನು ರಕ್ಷಿಸುವುದು ಯಾವುದೇ ಸರ್ಕಾರದ ಮೂಲಭೂತ ಕರ್ತವ್ಯವಾಗಿದ್ದು, ಸರ್ಕಾರ ಮತ್ತಷ್ಟು ವಿಳಂಬಕ್ಕೆ ಆಸ್ಪದ ನೀಡದೆ ಯೋಜನೆಗೆ ಅಗತ್ಯವಿರುವ ಧನಸಹಾಯ, ಪರಿಣತರ ನಿರ್ವಹಣೆ ಮತ್ತು ಆಡಳಿತಾತ್ಮಕ ಚೌಕಟ್ಟನ್ನು ಒದಗಿಸುವ ಮೂಲಕ 'ಉದಯರವಿ'ಯನ್ನು ವಿಶ್ವ ದರ್ಜೆಯ ಸ್ಮಾರಕವನ್ನಾಗಿ ರೂಪಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು? | ನಾನು ದಿನಾಂಕ:13-01-2026ರಂದು ಮಹಾಕವಿ ಕುವೆಂಪುರವರ ಮೈಸೂರಿನ ನಿವಾಸ ಉದಯರವಿ ಇಲ್ಲಿಗೆ ಭೇಟಿ ನೀಡಿ ರಾಷ್ಟ್ರಕವಿ ಕುವೆಂಪು ರವರ ಮಗಳಾದ ಶ್ರೀಮತಿ ತಾರಿಣಿ ಚಿದಾನಂದ ಹಾಗೂ ಅಳಿಯ ಪ್ರೊ.ಕೆ.ಚಿದಾನಂದಗೌಡ ಅವರುಗಳ ಜೊತೆ ಮಾತನಾಡಿದ್ದು, ಮೈಸೂರಿನ ವಿ.ವಿ.ಪುರಂನಲ್ಲಿರುವ ರಾಷ್ಟ್ರಕವಿ ಕುವೆಂಪುರವರು ವಾಸವಿದ್ದ ಉದಯರವಿ ನಿವಾಸವನ್ನು ಸ್ಮಾರಕ ಮತ್ತು ಮ್ಯೂಸಿಯಂ (ವಸ್ತು ಸಂಗ್ರಹಾಲಯವಾಗಿ) ಅಭಿವೃದ್ಧಿಪಡಿಸುವ ಬಗ್ಗೆ ಸನ್ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಸೂಕ್ತ ನಿರ್ಧಾರವನ್ನು ಕೈಗೊಳ್ಳುವುದಾಗಿ ತಿಳಿಸಿರುತ್ತೇನೆ. ಅದರಂತೆ ಕ್ರಮವಹಿಸಲಾಗುವುದು. |
| ಈ) | ಸಾಹಿತಿ ಆರ್.ಕೆ. ನಾರಾಯಣ್ ಅವರ ಮನೆಯನ್ನು ವಸ್ತು ಸಂಗ್ರಹಾಲಯವಾಗಿ ಮಾಡಿರುವ ರೀತಿಯಲ್ಲಿಯೇ ಕುವೆಂಪು ಅವರ ಮನೆಯನ್ನೂ ಮ್ಯೂಸಿಯಂ ಆಗಿ ಪರಿವರ್ತಿಸಿದರೆ ಸಾಹಿತ್ಯಸಕ್ತರಿಗೆ ಪ್ರೇರಣೆ ಹಾಗೂ ಸಾಹಿತ್ಯದ ಒಂದಿಷ್ಟು ಕೆಲಸಗಳು ಆಗಬಹುದು ಎನ್ನುವ ದೃಷ್ಟಿಯಿಂದ 'ಉದಯ ರವಿ'ಯನ್ನು ಸ್ಮಾರಕವಾಗಿಸುವ ಕುರಿತು ಮುಂದಿನ ಆಯವ್ಯಯದಲ್ಲಿ ಘೋಷಿಸಲು ಸರ್ಕಾರ ಉದ್ದೇಶಿಸಿದೆಯೇ; ಇದ್ದಲ್ಲಿ ಮಾಹಿತಿ ಒದಗಿಸುವುದು | |

ಸಂಖ್ಯೆ: ಕಸಂವಾ 17 ಕವಿಸ 2026

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು

ಅನುಬಂಧ -1

# ಆಯವ್ಯಯ

# 2018-19



16ನೇ ಫೆಬ್ರವರಿ 2018

ಮಂಡಿಸಿದವರು

**ಶ್ರೀ ಸಿದ್ಧರಾಮಯ್ಯ**

ಮಾನ್ಯ ಮುಖ್ಯಮಂತ್ರಿಗಳು

- ಕನ್ನಡ ನಾಡು-ನುಡಿ ಹಾಗೂ ಕಲೆ ಸಂಸ್ಕೃತಿಗಳ ಬೆಳವಣಿಗೆಗೆ ಸಹಕಾರಿಯಾದ 'ಸಾಂಸ್ಕೃತಿಕ ನೀತಿ'ಯನ್ನು ನಮ್ಮ ಸರ್ಕಾರ ರೂಪಿಸಿ ಜಾರಿಗೊಳಿಸಿದೆ.

- ಕಲೆ, ಸಾಹಿತ್ಯ, ಸಂಸ್ಕೃತಿ ಕ್ಷೇತ್ರಗಳಲ್ಲಿ ಸಕ್ರಿಯವಾಗಿರುವ ಸಂಘ ಸಂಸ್ಥೆಗಳಿಗೆ ಉತ್ತೇಜನ ನೀಡಲು ಧನಸಹಾಯ ನೀಡಲಾಗುತ್ತಿದೆ. ಜನಪದ ಮತ್ತು ವಾದ್ಯ ಸಂಗೀತ ಕಲಾವಿದರಿಗೆ ವೇಷಭೂಷಣ ಹಾಗೂ ವಾದ್ಯಪರಿಕರಗಳ ಖರೀದಿಗೆ ಆರ್ಥಿಕ ನೆರವು ಒದಗಿಸಲಾಗುತ್ತಿದೆ.

- ಇಳಿವಯಸ್ಸಿನಲ್ಲಿರುವ ಅಶಕ್ತ ಕಲಾವಿದರ ಗೌರವಯುತ ಜೀವನ ನಿರ್ವಹಣೆಗಾಗಿ ನೀಡುತ್ತಿರುವ ಮಾಸಾಶನ ಮೊತ್ತವನ್ನು 1000 ರೂ.ಗಳಿಂದ 1500 ರೂ.ಗಳಿಗೆ ಹೆಚ್ಚಿಸಿ ಕಳೆದ ಐದು ವರ್ಷಗಳಲ್ಲಿ ಒಟ್ಟು 8330 ಕಲಾವಿದರಿಗೆ ಮಾಸಾಶನ ಮಂಜೂರು ಮಾಡಲಾಗಿದೆ.

- ಜಗತ್ತಿನ ಜ್ಞಾನವನ್ನು ಕನ್ನಡ ಭಾಷೆಯಲ್ಲಿ ನೀಡುವ ಮಹತ್ವಾಕಾಂಕ್ಷೆಯಿಂದ ಆರಂಭಿಸಿರುವ "ಕಣಜ" ಅಂತರ್ಜಾಲ ಕನ್ನಡ ಜ್ಞಾನಕೋಶವು ಲಕ್ಷಾಂತರ ಜನರಿಗೆ ಪಠ್ಯ, ಧ್ವನಿ ಮತ್ತು ದೃಶ್ಯ ಮಾಧ್ಯಮಗಳ ಮೂಲಕ ಮಾಹಿತಿ ಒದಗಿಸುತ್ತಿದೆ.

**2018-19ನೇ ಸಾಲಿನ ಹೊಸ ಯೋಜನೆಗಳು**

252. ಮಹಾಕವಿ ಕುವೆಂಪುರವರ ಮೈಸೂರಿನ ನಿವಾಸ "ಉದಯರವಿ"ಯನ್ನು ರಾಷ್ಟ್ರಕವಿ ಸ್ಮಾರಕವಾಗಿ ಸಂರಕ್ಷಿಸಿ ಅಭಿವೃದ್ಧಿಪಡಿಸಲಾಗುವುದು. ಮಹಾಕವಿಯ ದರ್ಶನವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ಸ್ಮಾರಕದ ಉದ್ದೇಶವಾಗಿರುತ್ತದೆ.

253. ಭಾರತದ ಗ್ರಾಮೀಣ ಜನಪದ ಮತ್ತು ಸಾಂಸ್ಕೃತಿಕ ಕಲೆಗಳನ್ನು ಕರ್ನಾಟಕದ ಜನರಿಗೆ ಹಾಗೂ ಕನ್ನಡ ನಾಡಿನ ಜನಪದ ಸಂಸ್ಕೃತಿಯನ್ನು ಇಡೀ ಭಾರತಕ್ಕೆ ಪರಿಚಯಿಸುವ "ಜನಪದ ಸಾಂಸ್ಕೃತಿಕ ಭಾರತ" ಕಾರ್ಯಕ್ರಮವನ್ನು ರೂಪಿಸಿ ಅನುಷ್ಠಾನಗೊಳಿಸಲಾಗುವುದು.